## 13. ಸಂಸತ್: ಬಾಲಿವುಡ್ ಡ್ರಗ್ ಗಲಾಟೆ

ಬಾಲಿವುಡ್ 'ಮಾದಕ ನಂಟು' ವಿಚಾರ ಸಂಸತ್ ಅಧಿವೇಶನದಲ್ಲಿ ಪ್ರತಿಧ್ವನಿಸಿದ್ದು, ಸಂಸತ್ ಸದಸ್ಯರು ಹಾಗೂ ಬಾಲಿವುಡ್‌ನ ನಟ–ನಟಿಯರ ನಡುವೆ ವಾಗ್ವಾದಕ್ಕೂ ಕಾರಣವಾಗಿದೆ.

ಹಿರಿಯ ನಟಿ ಹಾಗೂ ರಾಜ್ಯಸಭೆ ಸದಸ್ಯೆಯಾಗಿರುವ ಜಯಾ ಬಚ್ಚನ್ ಅವರು ಕಲಾಪದ ವೇಳೆ ಪ್ರಸ್ತಾಪಿಸಿದ್ದಲ್ಲದೆ, ಬಾಲಿವುಡ್‌ಗೆ ಕಳಂಕ ತರಲು ನಡೆಯುತ್ತಿರುವ ಪ್ರಯತ್ನದ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು. ಇಂಡಸ್ಟ್ರಿಯಲ್ಲಿ ಇರುವವರೇ ಬಾಲಿವುಡ್ ಬಗ್ಗೆ ಅವಹೇಳನ ಮಾಡುತ್ತಿದ್ದು, ತಮಗೆ ಅನ್ನ ನೀಡುವ ಕೈಗಳನ್ನೇ ಕಚ್ಚುವಂಥ ಕೆಲಸ ಮಾಡುತ್ತಿದ್ದಾರೆಂದು ಅವರು ಲೋಕಸಭೆಯಲ್ಲಿ ಬಾಲಿವುಡ್ ಡ್ರಗ್ ನಂಟು ವಿರುದ್ಧ ಪರೋಕ್ಷ ವಾಗ್ದಾಳಿ ನಡೆಸಿದ್ದಾರೆ. ಮನರಂಜನಾ ಕ್ಷೇತ್ರವನ್ನು ಕೆಲವರು 'ಚರಂಡಿ' ಎಂದು ಕರೆದಿದ್ದಾರೆ. ಇದನ್ನು ನಾನು ಒಪ್ಪುವುದಿಲ್ಲ. ಯಾರೋ ಒಂದಿಬ್ಬರು ಮಾಡಿದ ಕೆಲಸಕ್ಕೆ ಇಡೀ ಇಂಡಸ್ಟ್ರಿಯನ್ನು ತೆಗಳುವುದು ಸರಿಯಲ್ಲ. ದೇಶದಲ್ಲಿ ಪ್ರಾಕೃತಿಕ ವಿಕೋಪ ಸೇರಿದಂತೆ ಯಾವುದೇ ಸಂಕಷ್ಟದ ಸಮಯದಲ್ಲೂ ಬಾಲಿವುಡ್ ಸ್ಪಂದಿಸಿದೆ. ಸರ್ಕಾರವು ಬಾಲಿವುಡ್‌ನ ಬೆಂಬಲಕ್ಕೆ ನಿಲ್ಲಬೇಕಿದೆ ಎಂದು ಆಗ್ರಹಿಸಿದ್ದಾರೆ.

**ಪ್ರಾಣತ್ಯಾಗಕ್ಕೂ ಸಿದ್ಧ:** ಸಂಸದ ರವಿಕಿಶನ್, ನಮ್ಮ ಸಿನಿಮಾ ಕ್ಷೇತ್ರವನ್ನು ಮುಗಿಸಲು ಸಂಚು ಮಾಡಲಾಗಿದೆ. ಆ ಕ್ಷೇತ್ರದ ಜವಾಬ್ದಾರಿಯುತ ಸದಸ್ಯನಾಗಿ ಸಂಸತ್‌ನಲ್ಲಿ ಪ್ರಸ್ತಾಪಿಸುವುದು ನನ್ನ ಕರ್ತವ್ಯ. ಡ್ರಗ್ ಸೇವನೆಯು ಬಾಲಿವುಡ್‌ನಲ್ಲಿ ಫ್ಯಾಷನ್ ಆಗಿಬಿಟ್ಟಿದೆ. 90ರ ದಶಕದಲ್ಲಿ ಇದು ಇರಲಿಲ್ಲ. ಡ್ರಗ್‌ನಿಂದ ಚಿತ್ರರಂಗವನ್ನು ರಕ್ಷಿಸಲು ಯತ್ನಿಸಿದ್ದೇನೆ. ನನ್ನ ಪ್ರಾಣ ಹೋದರೂ ಚಿಂತೆಯಿಲ್ಲ. ಬಾಲಿವುಡ್ ಡ್ರಗ್ ಕೇಸಿನ ಬಗ್ಗೆ ಧ್ವನಿಯೆತ್ತುತ್ತೇನೆ ಎಂದಿದ್ದಾರೆ.

ಸಿನಿಮಾ ಕ್ಷೇತ್ರದಲ್ಲಿರುವ ಮಂದಿ ಮತ್ತು ಡ್ರಗ್ ಕಳ್ಳಸಾಗಾಣೆದಾರರ ನಡುವೆ ನಂಟಿರುವ ಬಗ್ಗೆ ಇನ್ನೂ ಸ್ಪಷ್ಟವಾದಂಥ ಯಾವುದೇ ಸಾಕ್ಷ್ಯ ಎನ್‌ಸಿಬಿಗೆ ಸಿಕ್ಕಿಲ್ಲ ಎಂದು ಸರ್ಕಾರ ಲೋಕಸಭೆಗೆ ಮಾಹಿತಿ ನೀಡಿದೆ.

**ಸಾಮಾಜಿಕ ಅಂತರ ಬೇಡ; ಶಾರೀರಿಕ ಅಂತರವಿರಲಿ:** ಕೊರೋನಾ ಹಿನ್ನೆಲೆ ಬಳಸಲಾಗುವ 'ಸಾಮಾಜಿಕ ಅಂತರ' ಎಂಬ ಪದಬಳಕೆ ಮಾಡುವುದು ಸೂಕ್ತ ಎಂಬ ಅಭಿಪ್ರಾಯ ರಾಜ್ಯ ಸಭೆಯಲ್ಲಿ ವ್ಯಕ್ತವಾಯಿತು. ಸಾಮಾಜಿಕ ಅಂತರ ಎಂಬ ಪದದಿಂದಾಗಿ ಸೋಂಕಿತರು ಮತ್ತು ಅವರ ಕುಟುಂಬ ಸದಸ್ಯರು ಸಾಮಾಜಿಕ ಕಳಂಕ ಎದುರಿಸಿದಂತಾಗುತ್ತಿದೆ. ಅವರನ್ನು ಎಲ್ಲರೂ ದೂರವಿಟ್ಟು ಬಹಿಷ್ಕರಿಸಿದಂಥ ಭಾವನೆ ಮೂಡುತ್ತದೆ. ಹಾಗಾಗಿ ಈ ಪದದ ಬಳಕೆಯ ಬದಲಿಗೆ ಶಾರೀರಿಕ ಅಂತರ ಎಂಬ ಪದಬಳಕೆ ಮಾಡುವುದು ಉತ್ತಮವಲ್ಲವೆಂದು ಟಿಎಂಸಿ ನಾಯಕ ಶಾಂತನು ಸೇನ್ ಪ್ರಶ್ನಿಸಿದರು. ಈ ಸಲಹೆಗೆ ಒಪ್ಪಿದ ಸಭಾಪತಿ ವೆಂಕಯ್ಯ ನಾಯ್ಡು, ಸೂಕ್ತ ಪದವನ್ನೇ ಬಳಕೆ ಮಾಡುವಂತೆ ಹೇಳಿದರು.

ಆಧಾರ:ಉದಯವಾಣಿ, ದಿನಾಂಕ:16.09.2020